## ಕರ್ನಾಟಕ ಸರ್ಕಾರ

ಸಂಖ್ಯೆ:ಗ್ರಾಅಪ/441/ಗ್ರಾಪಂಅ/2016 (ಭಾಗ-3)

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ: 28-10-2016.

### ಸುತ್ತೋಲೆ

**ವಿಷಯ:** ಗ್ರಾಮ ಪಂಚಾಯತಿ ವ್ಯಾಪ್ತಿಯ ಗ್ರಾಮಗಳ ಗ್ರಾಮಠಾಣಾ ಗಡಿ ತುಂಬಾ ಹಿಂದೆ ನಿಗದಿಪಡಿಸಿದ್ದು, ಪ್ರಸ್ತುತ ವಿಸ್ತರಣೆಯಾಗಿರುವ ಪ್ರದೇಶ ಒಳಗೊಂಡಂತೆ ಹೊಸದಾಗಿ ಸರ್ವೆ ಮಾಡಿಸಿ ಗ್ರಾಮಠಾಣಾವನ್ನು ಪುನರ್ ನಿಗದಿಪಡಿಸುವ ಬಗ್ಗೆ.

**ಉಲ್ಲೇಖ:** ದಿನಾಂಕ 21.09.2016 ರಂದು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಮತ್ತು ಕಂದಾಯ ಸಚಿವರ ಜಂಟಿ ಅಧ್ಯಕ್ಷತೆಯಲ್ಲಿ ಇ-ಸ್ವತ್ತು ಯೋಜನೆ ಅನುಷ್ಠಾನದ ಬಗೆಗಿನ ಸಮಸ್ಯೆಗಳ ಬಗ್ಗೆ ನಡೆದ ಸಭೆಯ ನಡವಳಿಗಳು.

---

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಗಳ ಆಯವ್ಯಯ ಮತ್ತು ಲೆಕ್ಕಪತ್ರಗಳು) ನಿಯಮಗಳು, 2006 ರ ನಿಯಮ 28 ರಂತೆ ರಾಜ್ಯದ ಗ್ರಾಮ ಪಂಚಾಯತಿಗಳ ಗ್ರಾಮಠಾಣಾ ವ್ಯಾಪ್ತಿಯಲ್ಲಿ ಬರುವ ಆಸ್ತಿಗಳ ತೆರಿಗೆ ನಿರ್ಧರಣೆ ಪಟ್ಟಿಯನ್ನು ನಮೂನೆ-9 ರಲ್ಲಿ ಮತ್ತು ನಿಯಮ 30 ರಂತೆ ಭೂಮಿ ಮತ್ತು ಕಟ್ಟಡದ ತೆರಿಗೆಗಳ ಬೇಡಿಕೆ ಮತ್ತು ವಸೂಲಾತಿ ರಿಜಿಸ್ಟರ್ ಅನ್ನು ನಮೂನೆ-11ಎ ರಲ್ಲಿ ಗ್ರಾಮ ಪಂಚಾಯತಿಗಳು ನಿರ್ವಹಿಸುತ್ತಿವೆ.

ಕರ್ನಾಟಕ ಭೂ ಕಂದಾಯ ಅಧಿನಿಯಮ, 1964 ರ ಪ್ರಕರಣ 148 ಮತ್ತು ಕರ್ನಾಟಕ ಭೂ ಕಂದಾಯ ನಿಯಮಾವಳಿ 1966 ರ ನಿಯಮ 82 ರಂತೆ ಕೃಷಿಯೇತರ ಜಮೀನಿನಲ್ಲಿರುವ ಆಸ್ತಿಗಳಿಗೆ ಸಂಬಂಧಿಸಿದಂತೆ ಭೂ ಮಾಪನ ವ್ಯವಸ್ಥೆ ಮತ್ತು ಭೂ ದಾಖಲೆಗಳ ಇಲಾಖೆಯು ಪಟ್ಟಣಗಳಲ್ಲಾಗಲಿ, ನಗರಗಳಲ್ಲಾಗಲಿ ಅಥವಾ ಹಳ್ಳಿಗಳಲ್ಲಾಗಲಿ ದಾಖಲೆಗಳನ್ನು ನಿರ್ವಹಿಸುವ ಜವಾಬ್ದಾರಿ ಹೊಂದಿರುತ್ತದೆ.

ಪ್ರಸ್ತುತ ಇರುವ ಗ್ರಾಮ ಪಂಚಾಯತಿ ವ್ಯಾಪ್ತಿಯ ಗ್ರಾಮಠಾಣಾದ ಜೊತೆಗೆ ಗ್ರಾಮಗಳಲ್ಲಿ ಗ್ರಾಮಠಾಣಾಕ್ಕೆ ಹೊಂದಿಕೊಂಡಂತೆ ಗ್ರಾಮಗಳ ಬೆಳವಣಿಗೆಯಾಗಿದ್ದು, ಗ್ರಾಮಠಾಣಾದ ಅಕ್ಕಪಕ್ಕದಲ್ಲಿ ವಿವಿಧ ವಸತಿ ಯೋಜನೆಗಳಡಿ ಹಕ್ಕುಪತ್ರ ವಿತರಿಸಿ ಮನೆ ನಿರ್ಮಾಣ ಮಾಡಿಕೊಂಡಿರುತ್ತಾರೆ. ಇದಲ್ಲದೆ ಕೃಷಿ ಭೂಮಿಯಲ್ಲಿ ಮನೆಗಳನ್ನು ನಿರ್ಮಾಣ ಮಾಡಿಕೊಂಡಿದ್ದು, ಅವು ಸಕ್ರಮಗೊಂಡಿರುತ್ತವೆ. ಈ ಪ್ರದೇಶಗಳು ಗ್ರಾಮಠಾಣಾ ವ್ಯಾಪ್ತಿಗೆ ಒಳಪಡದಿರುವುದರಿಂದ ನಾಗರೀಕರು ಆಸ್ತಿಗಳಿಗೆ ಸಂಬಂಧಿಸಿದಂತೆ ಗ್ರಾಮ ಪಂಚಾಯತಿಗಳಿಂದ ನಮೂನೆ-9 ಮತ್ತು 11ಎ ಪಡೆಯಲು ತುಂಬಾ ಅನಾನುಕೂಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಈ ಹಿನ್ನೆಲೆಯಲ್ಲಿ ದಿನಾಂಕ:21-09-2016 ರಂದು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಮತ್ತು ಕಂದಾಯ ಸಚಿವರ ಸಮಕ್ಷಮ ಇ-ಸ್ವತ್ತು ಯೋಜನೆ ಅನುಷ್ಠಾನದ ಬಗೆಗಿನ ಸಮಸ್ಯೆಗಳ ಬಗ್ಗೆ ನಡೆದ ಸಭೆಯಲ್ಲಿ ಈ ವಿಷಯದ ಬಗ್ಗೆ ಸವಿವರವಾಗಿ ಚರ್ಚಿಸಲಾಗಿದ್ದು, ಗ್ರಾಮ ಪಂಚಾಯತಿ ವ್ಯಾಪ್ತಿಯ ಗ್ರಾಮಗಳ ಗ್ರಾಮಠಾಣಾ ಗಡಿ ತುಂಬಾ ಹಿಂದೆ ನಿಗದಿಪಡಿಸಿದ್ದು, ಪ್ರಸ್ತುತ ವಿಸ್ತರಣೆಯಾಗಿರುವ ಪ್ರದೇಶ ಒಳಗೊಂಡಂತೆ ಹೊಸದಾಗಿ ಸರ್ವೆ ಮಾಡಿಸಿ ಗ್ರಾಮಠಾಣಾವನ್ನು ಪುನರ್ ನಿಗದಿಪಡಿಸುವ ಬಗ್ಗೆ ತೀರ್ಮಾನ ತೆಗೆದುಕೊಳ್ಳಲಾಗಿದೆ.

ಈ ಹಿನ್ನೆಲೆಯಲ್ಲಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಗ್ರಾಮಗಳ ಗ್ರಾಮಠಾಣಾ ಗಡಿಯನ್ನು ಪ್ರಸ್ತುತ ವಿಸ್ತರಣೆಯಾಗಿರುವ ಪ್ರದೇಶವನ್ನು ಒಳಗೊಂಡಂತೆ ಹೊಸದಾಗಿ ಸರ್ವೆ ಮಾಡಿಸಿ ಪುನರ್ ನಿಗದಿಪಡಿಸುವ ಬಗ್ಗೆ ಕಂದಾಯ ಇಲಾಖೆ ಮತ್ತು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಈ ಕೆಳಗಿನಂತೆ ಕ್ರಮ ವಹಿಸುವಂತೆ ಆದೇಶಿಸಿದೆ.

1) ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳ ಗ್ರಾಮ ಠಾಣಾ ಗಡಿ ತುಂಬಾ ಹಿಂದೆ ನಿಗದಿಪಡಿಸಿದ್ದು, ಮೂಲ ಗ್ರಾಮಠಾಣಾದ ಜೊತೆಗೆ ಹೊಂದಿಕೊಂಡಂತೆ ಪ್ರಸ್ತುತ ವಿಸ್ತರಣೆಯಾಗಿರುವ ಪ್ರದೇಶ ಒಳಗೊಂಡಂತೆ ಹೊಸದಾಗಿ ಸರ್ವೆ ಮಾಡಲು ಕ್ರಮ ವಹಿಸುವುದು.

2) ಸರ್ವೆಯರ್‌ಗೆ ಗ್ರಾಮ ಪಂಚಾಯತಿ ಕಾರ್ಯದರ್ಶಿ ಮತ್ತು ಗ್ರಾಮ ಲೆಕ್ಕಾಧಿಕಾರಿಗಳು ಸಹಕಾರ ನೀಡುವುದು.

3) ಗ್ರಾಮಠಾಣಾದ ಜೊತೆಗೆ ಹೊಂದಿಕೊಂಡಂತೆ ಪ್ರಸ್ತುತ ವಿಸ್ತರಣೆಯಾಗಿರುವ ಪ್ರದೇಶದ ಬಗ್ಗೆ ವಾರ್ಡ್ ಸಭೆ ಮತ್ತು ಗ್ರಾಮ ಸಭೆಗಳಲ್ಲಿ ಕಂದಾಯ ಇಲಾಖೆಯ ಗ್ರಾಮ ಲೆಕ್ಕಿಗರು, ರಾಜಸ್ವ ನಿರೀಕ್ಷಕರು ರವರು ಹಾಜರಾಗಿ ಈ ಬಗ್ಗೆ ಚರ್ಚಿಸಿ ತೀರ್ಮಾನ ತೆಗೆದುಕೊಳ್ಳುವುದು.

4) ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ವಾರ್ಡ್‌ಸಭೆ ಮತ್ತು ಗ್ರಾಮ ಸಭೆ ಹಾಗೂ ಸಾಮಾನ್ಯ ಸಭೆಗೆ ಕಂದಾಯ ಇಲಾಖೆಯ ಅಧಿಕಾರಿ / ನೌಕರರುಗಳನ್ನು ಆಹ್ವಾನಿಸುವುದು.

5) ಸರ್ವೆ ಮಾಡಿದ ಗ್ರಾಮಠಾಣಾ ವಿಸ್ತರಣೆಯ ಬಗ್ಗೆ ಗ್ರಾಮ ಪಂಚಾಯತಿ ಸಭೆಯಲ್ಲಿ ಸವಿವರವಾಗಿ ಚರ್ಚಿಸಿ ನಿರ್ಣಯ ತೆಗೆದುಕೊಂಡು, ತದನಂತರ ತಾಲ್ಲೂಕಿನ ತಹಶೀಲ್ದಾರ್ ಮತ್ತು ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಪ್ರಸ್ತಾವನೆ ಸಲ್ಲಿಸುವುದು.

6) ತಹಶೀಲ್ದಾರ ರವರು ಮತ್ತು ಕಾರ್ಯನಿರ್ವಾಹಕ ಅಧಿಕಾರಿಗಳು, ಈ ಬಗ್ಗೆ ಸ್ಥಳ ಪರಿಶೀಲನೆ ನಡೆಸಿ ಗ್ರಾಮಠಾಣಾ ವಿಸ್ತರಣೆ ಪ್ರದೇಶ ವಿಸ್ತರಣೆಯಾಗಿರುವ ಬಗ್ಗೆ ಕ್ರಮಬದ್ಧಪಡಿಸಿಕೊಂಡು ತದನಂತರ ಉಪವಿಭಾಗಾಧಿಕಾರಿಗಳಿಗೆ ಪ್ರಸ್ತಾವನೆ ಸಲ್ಲಿಸುವುದು.

7) ಉಪವಿಭಾಗಾಧಿಕಾರಿಗಳು ಪ್ರಸ್ತಾವನೆಯನ್ನು ಪರಿಶೀಲಿಸಿ ಕ್ರಮಬದ್ಧವಾಗಿರುವುದನ್ನು ಖಚಿತಪಡಿಸಿಕೊಂಡು ಭೂ ಮಾಪನ ವ್ಯವಸ್ಥೆ ಮತ್ತು ಭೂ ದಾಖಲೆಗಳ ಇಲಾಖೆಯ ಉಪನಿರ್ದೇಶಕರಿಗೆ ಸಲ್ಲಿಸುವುದು.

8) ಭೂ ದಾಖಲೆಗಳ ಉಪನಿರ್ದೇಶಕರು ಗ್ರಾಮಠಾಣಾ ವಿಸ್ತರಣೆಯ ಪ್ರಸ್ತಾವನೆಯನ್ನು ಪರಿಶೀಲಿಸಿ ಜಿಲ್ಲಾಧಿಕಾರಿಗಳಿಗೆ ಸಲ್ಲಿಸುವುದು.

9) ತದನಂತರ ಪ್ರಸ್ತಾವನೆಯನ್ನು ಪರಿಶೀಲಿಸಿ ಜಿಲ್ಲಾಧಿಕಾರಿಗಳು ಗ್ರಾಮಠಾಣಾ ವಿಸ್ತರಣೆ ಬಗ್ಗೆ ಆದೇಶ ಹೊರಡಿಸಲು ಕ್ರಮ ವಹಿಸುವುದು.

10) ಒಂದು ವೇಳೆ ಸರ್ವೆಯರ್‌ಗಳ ಲಭ್ಯತೆ ಇಲ್ಲದಿದ್ದಲ್ಲಿ ನಿವೃತ್ತ ಸರ್ವೆಯರ್‌ಗಳನ್ನು ನೇಮಿಸಿಕೊಳ್ಳುವುದು.

(ಡಾ: ಎನ್. ನಾಗಂಬಿಕಾದೇವಿ)
ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

(ಡಾ ಇ.ವಿ. ರಮಣರೆಡ್ಡಿ)
ಸರ್ಕಾರದ ಪ್ರಧಾನ ಕಾರ್ಯದರ್ಶಿ
ಕಂದಾಯ ಇಲಾಖೆ.

**ಗೆ:**

1) ಆಯುಕ್ತರು, ಭೂ ಮಾಪನ ವ್ಯವಸ್ಥೆ ಮತ್ತು ಭೂ ದಾಖಲೆಗಳ ಇಲಾಖೆ. ಬೆಂಗಳೂರು
2) ನೋಂದಣಿ ಮಹಾಪರಿವೀಕ್ಷಕರು ಮತ್ತು ಮುದ್ರಾಂಕಗಳ ಆಯುಕ್ತರು, ಬೆಂಗಳೂರು.
3) ಎಲ್ಲಾ ಪ್ರಾದೇಶಿಕ ಆಯುಕ್ತರು,
4) ಎಲ್ಲಾ ಜಿಲ್ಲಾಧಿಕಾರಿಗಳು,
5) ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
6) ಎಲ್ಲಾ ಉಪವಿಭಾಗಾಧಿಕಾರಿಗಳು,
7) ಎಲ್ಲಾ ತಾಲ್ಲೂಕು ಪಂಚಾಯತ್‌ಗಳ ಕಾರ್ಯನಿರ್ವಾಹಕ ಅಧಿಕಾರಿಗಳು,
8) ಎಲ್ಲಾ ತಹಶೀಲ್ದಾರ್‌ಗಳು
9) ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರು/ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

**ಪ್ರತಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರು.
2. ಮಾನ್ಯ ಕಂದಾಯ ಸಚಿವರ ಆಪ್ತ ಕಾರ್ಯದರ್ಶಿಯವರು
3. ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿ, ಗ್ರಾಅಪ ಇಲಾಖೆ.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಕಂದಾಯ ಇಲಾಖೆ.
5. ಎಲ್ಲಾ ಸರ್ಕಾರದ ಉಪಕಾರ್ಯದರ್ಶಿಗಳು, ಕಂದಾಯ ಇಲಾಖೆ.
6. ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
7. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.